NOVEMBER 18, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ರಾಜ್ಯದ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ 10 ಸಾವಿರ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಸಂಪರ್ಕ ಯೋಜನೆಯಡಿ, 31 ಜಿಲ್ಲೆಗಳ, 15 ಸಾವಿರ ಕಿಲೋಮೀಟರ್ ರಸ್ತೆ ಅಭಿವೃದ್ಧಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಿಳಿಸಿದ್ದಾರೆ. ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು, 15 ತಿಂಗಳಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ, ಪಾರದರ್ಶಕ ಟೆಂಡರ್, ಗುಣಮಟ್ಟದ ಕಾಮಗಾರಿ, ಮೂರು ಹಂತದ ಪರಿಶೀಲನೆಗೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

<><><>

ಇಂದು 9 ನೇ 'ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ' ದಿನ. 'ಪ್ರಾಕೃತಿಕ ಚಿಕಿತ್ಸೆ, ಸ್ವಸ್ಥ ಭಾರತ' ಎಂಬ ಧ್ಯೇಯದೊಂದಿಗೆ, ಆರೋಗ್ಯ ಮುಂಜಾಗ್ರತೆ, ಸಮತೋಲಿತ ಪೌಷ್ಟಿಕ ಆಹಾರ ಪೂರೈಕೆ, ಶಾರೀರಿಕ ಚಟುವಟಿಕೆ, ಹಾಗೂ ಬೊಜ್ಜು –ಸ್ಥೂಲ ಕಾಯ ತಡೆಗೆ ಆದ್ಯತೆ ನೀಡಲಾಗುತ್ತಿದೆ. ಬೆಂಗಳೂರು ನೆಲಮಂಗಲದಲ್ಲಿರುವ, ಕೇಂದ್ರ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಸಂಶೋಧನ ಸಂಸ್ಥೆಯಲ್ಲಿ ಪ್ರಧಾನ ಕಾರ್ಯಕ್ರಮ ಆಯೋಜನೆಗೊಂಡಿದೆ. ಕೇಂದ್ರ ಆಯುಷ್ ಇಲಾಖೆ, ರಾಜ್ಯ ಖಾತೆ ಸಚಿವ ಪ್ರತಾಪ ರಾವ್ ಜಾಧವ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

ಗದಗ –ಬೆಟಗೇರಿ, ಹೊರವಲಯದ ನರಸಾಪೂರದಲ್ಲಿ, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ– KSCA ವತಿಯಿಂದ, ನೂತನ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಭೂಮಿ ಪೂಜೆ

ನೆರವೇರಿಸಲಾಯಿತು. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಅಧ್ಯಕ್ಷ, ವೆಂಕಟೇಶ ಪ್ರಸಾದ್, ಕ್ರೀಡಾಂಗಣ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಿದರು. ಗದಗ ಶಾಸಕ ಎಚ್.ಕೆ. ಪಾಟೀಲ ಅವರ ವಿಶೇ ' ಆಸಕ್ತಿ, ದೂರದೃಷ್ಟಿ ಹಾಗೂ ನಿರಂತರ ಪ್ರಯತ್ನದ ಫಲವಾಗಿ, ಈ ಮಹತ್ವದ ಯೋಜನೆ ಜಾರಿಗೊಳ್ಳುತ್ತಿದೆ ಎಂದರು. ಶಾಸಕ ಎಚ್ ಕೆ ಪಾಟೀಲ, ಸೇರಿದಂತೆ ಕ್ರೀಡಾಭಿಮಾನಿಗಳು ಪಾಲ್ಗೊಂಡಿದ್ದರು.

<><><>

ರಾಜ್ಯದಲ್ಲಿ, ಅತಿ ಹಿಂದುಳಿದ ಸಣ್ಣ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಮತ್ತು ಸಮರ್ಪಕ ಪ್ರಾತಿನಿಧ್ಯ ಕಲ್ಪಿಸುವ ನಿಟ್ಟಿನಲ್ಲಿ, ಓಬಿಸಿ ಒಳ ಮೀಸಲಾತಿ ಜಾರಿಗೊಳಿಸಬೇಕು ಎಂದು ವಿಧಾನ ಪರಿ 'ತ್ ಸದಸ್ಯ ಹಾಗೂ ಓಬಿಸಿ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಆಗ್ರಹಿಸಿದ್ದಾರೆ. ಹಾಸನದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ದೊರೆತು, ಎಂಟು ದಶಕ ಕಳೆದರೂ, ಅನೇಕ ಸಣ್ಣ ಸಮುದಾಯಗಳು ಶಿಕ್ಷಣ, ಉದ್ಯೋಗ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಸೂಕ್ತ ಅವಕಾಶಗಳಿಂದ ವಂಚಿತವಾಗಿವೆ ಎಂದರು. ವಿಶ್ವಕರ್ಮ, ಬಡಗಿ, ಅಕ್ಕಸಾಲಿಗ, ಕಂಬಾರ, ಕುಂಬಾರ, ಮಡಿವಾಳ, ಹಡಪದ, ಅಗಸ, ಗಾಣಿಗ ಸೇರಿದಂತೆ ಕಾಯಕ ಸಮುದಾಯಗಳ ಹಿಂದುಳಿದ ಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದ್ದಾರೆ.

<><><>

ರಾಯಚೂರು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪ್ರಯುಕ್ತ ಆಯೋಜಿತ, 'ಮಹರ್ಷಿ ವಾಲ್ಮೀಕಿ ಚಿಂತನೆಗಳು : ಒಂದು ಅನುಸಂಧಾನ' ವಿ 'ಯ ಕುರಿತ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಲೋಕಸಭಾ ಸಂಸದ ಜಿ. ಕುಮಾರ ನಾಯಕ್ ಉದ್ಘಾಟಿಸಿದರು.

<><><>

ಕೇಂದ್ರ ಸರ್ಕಾರ, ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ತರಲು ಹಾಗೂ ಅರ್ಹ ರೈತರಿಗೆ ಸಬ್ಸಿಡಿ ದರದಲ್ಲಿ ಗೊಬ್ಬರ ದೊರೆಯುವಂತೆ ಮಾಡಲು ಹೊಸ ಡಿಜಿಟಲ್ ವ್ಯವಸ್ಥೆಯನ್ನು ಜಾರಿಗೆ ತರುತ್ತಿದೆ. ಈ ವಿತರಣಾ ಕ್ರಮ, ತುಮಕೂರು ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಜಾರಿ ಮಾಡಲಾಗಿದೆ.

<><><>

ರಾಯಚೂರು ನಗರ, ಕೇಂದ್ರ ಗ್ರಂಥಾಲಯದಲ್ಲಿ, ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಹಾಗೂ ಪಂಡಿತ ಜವಹರಲಾಲ್ ನೆಹರು ಅವರ ಜನ್ಮದಿನದ ಅಂಗವಾಗಿ ಆಯೋಜಿತ, ಪುಸ್ತಕ ಪ್ರದರ್ಶನ

ಕಾರ್ಯಕ್ರಮಕ್ಕೆ ನಗರದ ಮುಖ್ಯ ಗ್ರಂಥಾಲಯಾಧಿಕಾರಿ ನಿರ್ಮಲಾ ಹೆಚ್. ಹೊಸೂರು ಚಾಲನೆ ನೀಡಿದರು.

<><><>

ಬಾಗಲಕೋಟೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು, ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್ ಸೂಚಿಸಿದ್ದಾರೆ.

<><><>

ರಾಯಚೂರು ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ, ನವಜಾತ ಶಿಶು ಸಪ್ತಾಹ, ನ್ಯುಮೋನಿಯಾ ಸ್ಥಿರೀಕರಣ', ಅತಿಸಾರ ಬೇಧಿ ತಡೆ ಅಭಿಯಾನ–2026 ಕ್ಕೆ ಚಾಲನೆ ನೀಡಲಾಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾಕ್ಟರ ಎಂ.ಎನ್ ನಂದಿತಾ ನೇತೃತ್ವದಲ್ಲಿ, ಈಗಾಗಲೇ ವ್ಯಾಪಕ ಚಟುವಟಿಕೆಗಳನ್ನು ಆಯೋಜಿಸಲಾಗಿದೆ. ಮಗುವಿನ ಜನನದ ನಂತರ ಕೂಡಲೇ ಸ್ತನ್ಯಪಾನ, ವಯಸ್ಸಿಗೆ ಅನುಗುಣವಾಗಿ ಲಸಿಕೆಗಳನ್ನು ಹಾಕಿಸುವುದು, ಆರು ತಿಂಗಳ ನಂತರ ಪೂರಕ ಆಹಾರ ಆರಂಭಿಸುವಂತೆ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

<><><>

ಬೆಂಗಳೂರಿನ, ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನಗಳ ಸಂಸ್ಥೆ– ನಿಮ್ಹಾನ್ಸ್, ನಾಳೆಯಿಂದ, 21 ರ ವರೆಗೆ, ಸೊಸೈಟಿ ಫಾರ್ ಮೈಟೊಕಾಂಡ್ರಿಯಲ್ ರಿಸರ್ಚ್ ಅಂಡ್ ಮೆಡಿಸಿನ್ ನ, 12 ನೇ ವಾರ್ಷಿಕ ಸಮ್ಮೇಳನ ಆಯೋಜಿಸಿದೆ.
ಜೀವಕೋಶದ ಶಕ್ತಿ ಕೇಂದ್ರ– ಮೈಟೊಕಾಂಡ್ರಿಯಾ ಕ್ಷೇತ್ರದ ಸಂಶೋಧಕರು, ವೈದ್ಯರು, ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

ಧಾರವಾಡದ, ಕರ್ನಾಟಕ ವಿಶ್ವವಿದ್ಯಾಲಯ, ಪ್ರಸಕ್ತ ಸಾಲಿನ 'ಅರಿವೇ ಗುರು' ಪ್ರಶಸ್ತಿಯನ್ನು, ಹಾಸನದ ಹಿರಿಯ ಸಾಹಿತಿ, ಬಾನು ಮು ್ತಾಕ್ ಅವರಿಗೆ, 19ನೇ ತಾರೀಖು ಪ್ರದಾನಿಸಲಿದೆ. ಸುವರ್ಣ ಮಹೋತ್ಸವ ಸಭಾಭವನದಲ್ಲಿ, ಬೆಳಗ್ಗೆ 11:30ಕ್ಕೆ ಕಾರ್ಯಕ್ರಮ ನಡೆಯಲಿದ್ದು, ಕುಲಪತಿ ಎ.ಎಂ. ಖಾನ್ ಪ್ರಶಸ್ತಿ ಪ್ರದಾನ ಮಾಡಿ, ಗೌರವಿಸಲಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>